ಡಾ. ಮನಮೋಹನ್ ಸಿಂಗ್
ಬೆಂಗಳೂರು ನಗರ ವಿಶ್ವವಿದ್ಯಾನಿಲಯ

DR. MANMOHAN SINGH
BENGALURU CITY UNIVERSITY

ಆರು ನೀ ಅನಿರ್ಬಂಧ
BE BOUNDLESS

Office of the Registrar (Evaluation), Jnana Jyothi Central College Campus, Dr. B.R. Ambedkar Veedhi, Bengaluru – 560001
Ph. No. 080-22295559/29572003 | E-Mail ID:registrarevlubcu@gmail.com/regev@bcu.ac.in

ಸಂಖ್ಯೆ:ಡಾ.ಮ.ಸಿಂ.ಬೆಂ.ನ.ವಿ/ಪ.ವಿ/01/2026–27 ದಿನಾಂಕ: 07.11.2026

ಸುತ್ತೋಲೆ

ವಿಷಯ: 2025–26ನೇ ಸಾಲಿನ ಬಿ.ಎಡ್ ಮತ್ತು ಎಂ.ಎಡ್ 2 ಮತ್ತು 4ನೇ ಸೆಮಿಸ್ಟರ್ (ಫ್ರೆಷರ್ಸ್ ಮತ್ತು ರಿಪೀಟರ್ಸ್) ಪರೀಕ್ಷೆಗಳ ಮೌಲ್ಯಮಾಪನ ಕಾರ್ಯಕ್ಕೆ ಅಧ್ಯಾಪಕರನ್ನು ಕಡ್ಡಾಯವಾಗಿ ಕಳುಹಿಸಿಕೊಡುವ ಬಗ್ಗೆ

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ತಮಗೆ ತಿಳಿಸುವುದೆನೇಂದರೆ, ನವೆಂಬರ್ –2026 ರಲ್ಲಿ ನಡೆಯುತ್ತಿರುವ ಬಿ.ಎಡ್ ಮತ್ತು ಎಂ.ಎಡ್ 2 ಮತ್ತು 4ನೇ ಸೆಮಿಸ್ಟರ್ (ಫ್ರೆಷರ್ಸ್ ಮತ್ತು ರಿಪೀಟರ್ಸ್) ಪರೀಕ್ಷೆಗಳ ಮೌಲ್ಯಮಾಪನ ಕಾರ್ಯ ಆರಂಭಿಸಿ ಶೀಘ್ರವಾಗಿ ಫಲಿತಾಂಶಗಳನ್ನು ಪ್ರಕಟಿಸಬೇಕಿದೆ.

ಈಗಾಗಲೇ, ಬಿ.ಎಡ್ ಮತ್ತು ಎಂ.ಎಡ್ ಕೋರ್ಸುಗಳ ಉತ್ತರ ಪತ್ರಿಕೆಗಳು (Answer Scripts) ಹೆಚ್ಚಿರುವುದರಿಂದ ಎಲ್ಲಾ ಅರ್ಹ ಅಧ್ಯಾಪಕರು ಕಡ್ಡಾಯವಾಗಿ ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸಲು ನಿರ್ದೇಶನ ನೀಡಬೇಕೆಂದು/ ಸೂಚಿಸಬೇಕೆಂದು ಕೋರಲಾಗಿದೆ. **ಬಿ.ಎಡ್ ಮತ್ತು ಎಂ.ಎಡ್ 2 ಮತ್ತು 4ನೇ ಸೆಮಿಸ್ಟರ್ (ಫ್ರೆಷರ್ಸ್ & ರಿಪೀಟರ್ಸ್) ಪರೀಕ್ಷೆಗಳ ಮೌಲ್ಯಮಾಪನ ಕಾರ್ಯವು ಪರೀಕ್ಷಾ ವಿಭಾಗ, ನ್ಯಾಚುರಲ್ ಕಟ್ಟಡ (Stone Building), ಸೆಂಟ್ರಲ್ ಕಾಲೇಜ್, ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು ನಡೆಯಲಿದ್ದು, ಆಯಾ ವಿಷಯಗಳ ಮೌಲ್ಯಮಾಪಕರು ತಪ್ಪದೇ ಹಾಜರಾಗಿ ವಿದ್ಯಾರ್ಥಿಗಳ ಮತ್ತು ವಿಶ್ವವಿದ್ಯಾಲಯದ ಹಿತದೃಷ್ಟಿಯಿಂದ ಕಾರ್ಯ ನಿರ್ವಹಿಸಬೇಕೆಂದು ಕೋರಲಾಗಿದೆ. ಯಾವ ಕಾಲೇಜುಗಳಿಂದ ಮೌಲ್ಯಮಾಪನ ಕಾರ್ಯ ನಿರ್ವಹಿಸಲು ಬರದೇ ಇರುವರೋ ಅಂತಹ ಕಾಲೇಜಿನ ಫಲಿತಾಂಶವನ್ನು ಪ್ರಕಟಿಸಲಾಗುವುದಿಲ್ಲ**

KSU Act 2000 Section 73, 74 & 75 ಮತ್ತು ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ಕೈಪಿಡಿ 2018ರ ಪ್ರಕಾರ, ಪರೀಕ್ಷೆಯ ಕೆಲಸ ಕಡ್ಡಾಯವಾಗಿದ್ದು, ಎಲ್ಲಾ ಅಧ್ಯಾಪಕರುಗಳನ್ನು ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸಲು ಸೂಚಿಸಬೇಕೆಂದು ಮತ್ತೊಮ್ಮೆ ಕೋರಲಾಗಿದೆ.

ಆದುದರಿಂದ, ದಯಮಾಡಿ ತಾವು ಈ ವಿಚಾರದಲ್ಲಿ ಸಕ್ರಿಯ ಸಹಕಾರ ನೀಡಬೇಕೆಂದು ಕೋರಿದೆ.

ಕುಲಸಚಿವರು(ಮೌಲ್ಯಮಾಪನ)
ಕುಲಸಚಿವರು (ಮೌಲ್ಯಮಾಪನ)
ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಜ್ಞಾನ ಜ್ಯೋತಿ ಸೆಂಟ್ರಲ್ ಕಾಲೇಜು ಕ್ಯಾಂಪಸ್

ಗೆ,

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯವು ಎಲ್ಲಾ ಸಂಯೋಜಿತ ಕಾಲೇಜುಗಳ
ಪ್ರಾಂಶುಪಾಲರುಗಳು, ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು

ಪ್ರತಿಗಳು:

1. ವೆಬ್ಸೈಟ್ ನಿರ್ವಾಹಕರು, ಈ ಅಧಿಸೂಚನೆಯನ್ನು ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವೆಬ್ಸೈಟ್ ನಲ್ಲಿ ಪ್ರಕಟಿಸಲು ಮತ್ತು ಎಲ್ಲಾ ಬಿ.ಎಡ್ ಮತ್ತು ಎಂ.ಎಡ್ ವಿಭಾಗಗಳ ಮುಖ್ಯಸ್ಥರಿಗೆ ಹಾಗೂ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಎಸ್.ಎಂ.ಎಸ್ ಮೂಲಕ ಮಾಹಿತಿ ಒದಗಿಸಲು ಕೋರಿದೆ.
2. ಕಛೇರಿ ಪ್ರತಿ